26	ಯಾದಗಿರಿ	45
27	ಬಳ್ಳಾರಿ	102
28	ಬೀದರ್	92
29	ರಾಯಚೂರು	74
30	ಕೊಪ್ಪಳ	61
	ಒಟ್ಟು	**2,392**

ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಪ್ರಾರಂಭ

445 (826) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಹೊಸದಾಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶ ಹೊಂದಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿದೆ (ಸಂಪೂರ್ಣ ವಿವರ ನಿಡುವುದು)?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಮುದ್ದೇಬಿಹಾಳ ತಾಲ್ಲೂಕಿನ ಈ ಕೆಳಕಂಡ 6 ಸ್ಥಳಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಕೋರಲಾಗಿದೆ.

1) ಕಾಳಗಿ 2) ತಾಳಿಕೋಟಿ (ಕನ್ನಡ) 3) ತಾಳಿಕೋಟಿ (ಉರ್ದು) 4) ಬೊಮ್ಮನಹಳ್ಳಿ, 5) ನಾವದಗಿ 6) ಯರಝರಿ ಮುದ್ದೇಬಿಹಾಳ ತಾಲ್ಲೂಕಿನ ರೋಡಗಿ ಮತ್ತು ತಾಳೀಕೋಟೆ ಗ್ರಾಮದಲ್ಲಿರುವ 8ನೇ ತರಗತಿ ಹೊಂದಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆ ಗಳನ್ನಾಗಿ ಉನ್ನತೀಕರಿಸಿ ಪ್ರಾರಂಭಿಸಲು ಕೇಂದ್ರ ಸರ್ಕಾರದಿಂದ ಅನುಮೋದನೆ ದೊರಕಿದ್ದು ಇವುಗಳನ್ನು 2011–12ನೇ ಸಾಲಿನಿಂದ ಪ್ರಾರಂಭಿಸಲಾಗುವುದು.